158ನೇ ಶಿ ಮು (192)

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ ನಮೋಶಿ ಹಾಗೂ ಡಾ:ಧನಂಜಯ ಸರ್ಜಿ, ಇವರುಗಳು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ: 192ಕ್ಕೆ ಉತ್ತರ

**ಪ್ರಸ್ತಾಪಿಸಿರುವ ವಿಷಯ:**

"ರಾಜ್ಯದಲ್ಲಿ 2004ರ ನಂತರ ನೇಮಕವಾಗಿ ಸೇವೆ ಸಲ್ಲಿಸುತ್ತಿರುವ ಸರ್ಕಾರಿ ನೌಕರರಿಗೆ ಹೊಸ ಪಿಂಚಣಿ ಯೋಜನೆ (NPS) ಯನ್ನು ರದ್ದುಗೊಳಿಸಿ ಹಳೆ ಪಿಂಚಣಿ ಯೋಜನೆಯನ್ನು (OPS) ಜಾರಿಗೆ ತಂದೆ ತರುತ್ತೇವೆ ಎಂಬ ಭರವಸೆಯ ವಿಷಯವನ್ನು ತಮ್ಮ ಚುನಾವಣಾ ಪ್ರಣಾಳಿಕೆಯಲ್ಲಿ ತಿಳಿಸಿ ಅಧಿಕಾರಕ್ಕೆ ಬಂದು ಸುಮಾರು ಎರಡೂವರೇ ವರ್ಷಗಳೇ ಕಳೆದುಹೋದರೂ ಕೂಡ ಇಲ್ಲಿವರೆಗೆ ಈ ವಿಷಯದ ಬಗ್ಗೆ ಸರ್ಕಾರ ಯಾವುದೇ ಕ್ರಮಗಳನ್ನು ಕೈಗೊಳ್ಳುತ್ತಿಲ್ಲ. ಆದರೆ NPS ಯೋಜನೆ ನಿವೃತ್ತಿಯ ನಂತರ ಸೂಕ್ತವಾದ ಆರ್ಥಿಕ ಭದ್ರತೆಯನ್ನು ನೀಡುತ್ತಿಲ್ಲ. ಜೀವಮಾನ ಭದ್ರತೆ, ಕುಟುಂಬದ ಭದ್ರತೆ ಹಾಗೂ ನಿವೃತ್ತಿ ನಂತರದ ಜೀವನಕ್ಕೆ ಅವಶ್ಯಕವಾದ ಪಿಂಚಣಿ ಲಭ್ಯವಾಗದೇ ಇರುವುದು. ಇವುಗಳ ಬಗ್ಗೆ ಆತಂಕದಲ್ಲಿದ್ದ ರಾಜ್ಯದ ನೌಕರರಿಗೆ ಸರ್ಕಾರವು ನೀಡಿದ್ದ ಭರವಸೆಯನ್ನು ಹುಸಿಗೊಳಿಸಿದೆ. ಹೀಗಾಗಿ ರಾಜ್ಯ ಸರ್ಕಾರದ ಲಕ್ಷಾಂತರ ನೌಕರರು ಹಳೆ ಪಿಂಚಣಿ ಯೋಜನೆಯ(OPS) ಜಾರಿಗಾಗಿ ಚಾತಕಪಕ್ಷಿಗಳಂತೆ ಕಾದುಕುಳಿತಿದ್ದಾರೆ. ಹಳೆಯ ಪಿಂಚಣಿ ವ್ಯವಸ್ಥೆ (OPS) ಮಾತ್ರ ಸರ್ಕಾರದ ನೌಕರರಿಗೆ ನಿವೃತ್ತಿ ಬಳಿಕದ ಜೀವನದಲ್ಲಿ ಗೌರವಯುತ ಬದುಕು ನೀಡಬಲ್ಲದು. ಈಗಾಗಲೇ ಹಲವು ರಾಜ್ಯಗಳು ರಾಜಸ್ಥಾನ, ಛತ್ತೀಸ್‌ಗಢ, ಹಿಮಾಚಲ ಪ್ರದೇಶ, ಪಂಜಾಬ್ ಮತ್ತು ದೆಹಲಿಗಳಲ್ಲಿ OPS ಪುನ: ಜಾರಿಗೊಳಿಸಿದ್ದು, ನಮ್ಮ ರಾಜ್ಯದಲ್ಲೂ OPS ಅನ್ನು ಜಾರಿಗೊಳಿಸಿ ಈ ಹಿಂದೆ ರಾಜ್ಯದ ನೌಕರರಿಗೆ ನೀಡಿದ್ದ ಭರವಸೆಯನ್ನು ಉಳಿಸಿಕೊಳ್ಳುವಂತೆ ಕ್ರಮ ಕೈಗೊಳ್ಳಬೇಕೆಂಬ ವಿಷಯವನ್ನು ನಿಯಮ 72 ರಲ್ಲಿ ಮಾನ್ಯ ಮುಖ್ಯಮಂತ್ರಿಗಳ ಗಮನಸೆಳೆಯಬಯಸುತ್ತೇನೆ."

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ರಾಜ್ಯದ ಸ್ವಾಯತ್ತ ಸಂಸ್ಥೆಗಳು, ನಿಗಮ-ಮಂಡಳಿಗಳು, ಸಂಘಗಳು, ವಿಶ್ವವಿದ್ಯಾನಿಲಯಗಳು, ರಾಜ್ಯದ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೂ ಸಹ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ: 01.04.2006 ರಿಂದ ಜಾರಿಗೆ ಬರುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015ರಲ್ಲಿ ವಿಸ್ತರಿಸಲಾಗಿದೆ.

ರಾಜ್ಯದಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ / ಮಾರ್ಪಾಡು ಮಾಡಲು ಸಮಗ್ರವಾಗಿ ಪರಿಶೀಲಿಸಲು ಈಗಾಗಲೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 11.12.2018ರ ಮತ್ತು ದಿನಾಂಕ: 01.03.2023 ರ ಸರ್ಕಾರಿ ಆದೇಶಗಳನ್ವಯ ರಚಿಸಲಾಗಿರುವ ಸಮಿತಿಯನ್ನು ದಿನಾಂಕ: 16.08.2024ರಲ್ಲಿ ಪುನರ್ ರಚಿಸಿ ಆದೇಶಿಸಲಾಗಿದೆ.

ರಾಷ್ಟ್ರೀಯ ಪಿಂಚಣಿ ಯೋಜನೆಗೆ ಬದಲಾವಣೆ/ಮಾರ್ಪಾಡು ಮಾಡಿರುವ ರಾಜ್ಯಗಳಾದ ಆಂಧ್ರ ಪ್ರದೇಶ ಮತ್ತು ಹಿಮಾಚಲ ಪ್ರದೇಶ ರಾಜ್ಯಗಳಿಗೆ ಅಧಿಕಾರಿಗಳನ್ನೊಳಗೊಂಡ ತಂಡಗಳು ಅಧ್ಯಯನ ನಡೆಸಿ ವರದಿಗಳನ್ನು ಸಮಿತಿಗೆ ಸಲ್ಲಿಸಲಾಗಿದೆ. ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ.

**ಸಂಖ್ಯೆ: ಆಇ-ಪಿಇಎನ್/84/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿ